ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 07/1/2020

## ಕೇಂದ್ರ ಸರಕಾರದಿಂದ ಏಳು ರಾಜ್ಯಗಳಿಗೆ ₹ 5,908 ಕೋಟಿ ಪರಿಹಾರ

# ರಾಜ್ಯಕ್ಕೆ ಎರಡನೇ ಕಂತು ನೆರೆ ಪರಿಹಾರ ಬಂತು

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು 7/1/20

ಪ್ರತಿಪಕ್ಷಗಳ ಭಾರಿ ಒತ್ತಡ ಮತ್ತು ರಾಜ್ಯ ಸರಕಾರದ ಮನವಿಯ ಮೇರೆಗೆ ಕೇಂದ್ರ ಸರಕಾರದಿಂದ ರಾಜ್ಯಕ್ಕೆ ಎರಡನೇ ಕಂತಿನ ನೆರೆ ಪರಿಹಾರ ಬಿಡುಗಡೆಯಾಗಿದೆ. ಒಟ್ಟು 7 ರಾಜ್ಯಗಳಿಗೆ 5,908 ಕೋಟಿ ರು. ಬಿಡುಗಡೆಯಾಗಿದ್ದು, ರಾಜ್ಯಕ್ಕೆ 1868.85 ಕೋಟಿ ಸಿಕ್ಕಿದೆ.

ಕಳೆದ ವರ್ಷದ ಆಗಸ್ಟ್‌ನಲ್ಲಿ ರಾಜ್ಯದಲ್ಲಿ ಸುರಿದ ಭಾರಿ ಮಳೆಯಿಂದ ಉಂಟಾದ ಪ್ರವಾಹಕ್ಕೆ ಕೊನೆಗೂ ಕೇಂದ್ರ ಸರಕಾರ 1,869.85 ಕೋಟಿ ರುಪಾಯಿ ಪರಿಹಾರ ಮಂಜೂರು ಮಾಡಿದೆ. ಅಕ್ಟೋಬರ್‌ನಲ್ಲಿ ಕೇಂದ್ರ ಸರಕಾರವು ರಾಷ್ಟ್ರೀಯ ನೈಸರ್ಗಿಕ ವಿಪತ್ತು ಪರಿಹಾರ ನಿಧಿಯಿಂದ ಕರ್ನಾಟಕಕ್ಕೆ 1,200 ಕೋಟಿ ರು. ಮುಂಗಡ ಪರಿಹಾರ ಮಂಜೂರು ಮಾಡಿತ್ತು.

ಪ್ರಧಾನಿ ನರೇಂದ್ರ ಮೋದಿ ತುಮಕೂರಿಗೆ ಭೇಟಿ ನೀಡಿದ್ದಾಗ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕಾರ್ಯಕ್ರಮದ ವೇದಿಕೆಯಲ್ಲೇ ಪ್ರವಾಹ ಪರಿಹಾರ ಸೇರಿದಂತೆ ರಾಜ್ಯದ ಅಭಿವೃದ್ಧಿಗೆ ಅಗತ್ಯ ಅನುದಾನ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದರು. ಇದೀಗ ಕೇಂದ್ರ ಗೃಹ ಸಚಿವಾಲಯ ಹಣ ಮಂಜೂರು ಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯ ಪ್ರವಾಸದ ಅವಧಿಯಲ್ಲಿ ರಾಜ್ಯಕ್ಕೆ ನೀಡಬೇಕಾದ ಪರಿಹಾರ ಮತ್ತು ಅನುದಾನದ ಕುರಿತು ಯಾವುದೇ ಹೇಳಿಕೆ ನೀಡದಿರುವುದನ್ನು ಪ್ರತಿಪಕ್ಷಗಳು ವಿರೋಧಿಸಿದ್ದವು. ಸಾರ್ವಜನಿಕ ವಲಯದಿಂದಲೂ ಈ ಕುರಿತು ಭಾರಿ ಆಕ್ರೋಶ ವ್ಯಕ್ತವಾಗಿತ್ತು. ರಾಜ್ಯದ 25 ಸಂಸದರ ವಿರುದ್ಧವೂ ಟೀಕೆ ವ್ಯಕ್ತವಾಗಿತ್ತು.

### ಯಾವ ರಾಜ್ಯಕ್ಕೆ ಎಷ್ಟು?



**ಅಸ್ಸಾಂ-616.63**
**ಹಿಮಾಚಲ ಪ್ರದೇಶ-284.93**
**ಕರ್ನಾಟಕ -1,869.85**
**ಮಧ್ಯ ಪ್ರದೇಶ-1,749.73**
**ಮಹಾರಾಷ್ಟ್ರ-956.93**
**ತ್ರಿಪುರಾ-63.32**
**ಉತ್ತರ ಪ್ರದೇಶ-367.17**

2019ರ ಜುಲೈ ಮತ್ತು ಆಗಸ್ಟ್‌ನಲ್ಲಿ ಸುರಿದ ಭಾರಿ ಮಳೆ ಹಾಗೂ ಮಹಾರಾಷ್ಟ್ರದ ಅಣೆಕಟ್ಟೆಗಳಿಂದ ನೀರು ಹರಿಸಿದ್ದರಿಂದ ರಾಜ್ಯದಲ್ಲಿ ವಿಶೇಷವಾಗಿ ಉತ್ತರ ಕರ್ನಾಟಕ ಭಾಗದಲ್ಲಿ ಪ್ರವಾಹ ಸ್ಥಿತಿ ತಲೆದೋರಿತ್ತು. ಇದರಿಂದಾಗಿ ಅಂದಾಜು 38 ಸಾವಿರ ಕೋಟಿ ರು. ನಷ್ಟ ಉಂಟಾಗಿದೆ ಎಂದು ರಾಜ್ಯ ಸರಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಕೇಂದ್ರದಿಂದ ಗೃಹ ಸಚಿವ ಅಮಿತ್ ಶಾ ಹಾಗೂ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಪ್ರವಾಹ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದ್ದರು. ಬಳಿಕ ಕೇಂದ್ರದಿಂದ ಅತಿವೃಷ್ಟಿ ಅಧ್ಯಯನ ತಂಡ ಕೂಡ ಆಗಮಿಸಿ ಕೇಂದ್ರಕ್ಕೆ ವರದಿ ಸಲ್ಲಿಸಿತ್ತು. ಆದರೂ ಕೇಂದ್ರದಿಂದ ಎರಡನೇ ಕಂತಿನ ಬಿಡುಗಡೆಯಾಗಿರಲಿಲ್ಲ.

ಕೇಂದ್ರ ಸರಕಾರವು ರಾಜ್ಯಕ್ಕೆ ಆರ್ಥಿಕ ನೆರವು ನೀಡುತ್ತಿಲ್ಲ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಕಡೆಗಣಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಕರ್ನಾಟಕವನ್ನು ಕಡೆಗಣಿಸುತ್ತಿದ್ದಾರೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದರು.

2019ರಲ್ಲಿ ನೈರುತ್ಯ ಮುಂಗಾರು ವೇಳೆ ಉಂಟಾದ ಪ್ರವಾಹ, ಭೂಕುಸಿತ ಮತ್ತಿತರ ಪ್ರಕೃತಿ ವಿಕೋಪಗಳು ಉಂಟಾದ ಅಸ್ಸಾಂ, ಹಿಮಾಚಲ ಪ್ರದೇಶ, ಕರ್ನಾಟಕ, ಮಧ್ಯಪ್ರದೇಶ, ಮಹಾರಾಷ್ಟ್ರ, ತ್ರಿಪುರಾ ಮತ್ತು ಉತ್ತರ ಪ್ರದೇಶ ರಾಜ್ಯಗಳಿಗೆ 5,908 ಕೋಟಿ ರು ಪರಿಹಾರ ಬಿಡುಗಡೆ ಮಾಡಲಾಗಿದೆ ಎಂದು ಗೃಹ ಇಲಾಖೆ ತಿಳಿಸಿದೆ. ನವದೆಹಲಿಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಸಭೆಯಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಗೃಹ ಇಲಾಖೆ, ಹಣಕಾಸು, ಕೃಷಿ, ನೀತಿ ಆಯೋಗದ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.